ಪಶು ಚಿಕಿತ್ಸಾ ಕೇಂದ್ರ ಕಟ್ಟಡಗಳ ನಿರ್ಮಾಣ

252(415) ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು ವಿಧಾನಸಭಾ ಕ್ಷೇತ್ರ):– ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನಲ್ಲಿ ಇರುವ ಪಶು ಚಿಕಿತ್ಸಾ ಕೇಂದ್ರ/ಆಸ್ಪತ್ರೆಗಳು ಸುಸ್ಥಿತಿ ಹಾಗೂ ಸ್ವಂತ ಕಟ್ಟಡದಲ್ಲಿ ನಡೆಯುತ್ತಿರುವುದೇ;

(ಆ) ತಾಲ್ಲೂಕಿಗೆ 2009–10ನೇ ಸಾಲಿನಿಂದ ಪಶು ಚಿಕಿತ್ಸಾ ಆಸ್ಪತ್ರೆಗಳ ನಿರ್ಮಾಣಕ್ಕೆ ಬಿಡುಗಡೆಗೊಂಡ ಅನುದಾನವೆಷ್ಟು (ವಿವರ ನೀಡುವುದು);

(ಇ) ನಿರ್ಮಾಣಗೊಂಡ ಆಸ್ಪತೆಗಳು ಸಾರ್ವಜನಿಕವಾಗಿ ಉಪಯೋಗ ವಾಗುತ್ತಿರುವುದೇ; ಇಲ್ಲದಿದ್ದಲ್ಲಿ ಕಾರಣವೇನು?

(ಈ) ಹೊಸ ಚಿಕಿತ್ಸೆಗಳ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ಸಲ್ಲಿಸಿದ್ದಲ್ಲಿ ವಿವರ ನೀಡುವುದು.

(ಉ) ಈ ಬಗ್ಗೆ ಸರ್ಕಾರದ ವತಿಯಿಂದ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) :–

(ಅ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನಲ್ಲಿ 23 ಪಶುವೈದ್ಯಕೀಯ ಸಂಸ್ಥೆಗಳಿದ್ದು, ಇವುಗಳಲ್ಲಿ 22 ಸಂಸ್ಥೆಗಳು ಸ್ವಂತ ಕಟ್ಟಡಗಳನ್ನು ಹೊಂದಿರುತ್ತವೆ.

ಸಿಂಗಮಾರನಹಳ್ಳಿ ಪಶುವೈದ್ಯಕೀಯ ಸಂಸ್ಥೆಯ ಕಾಮಗಾರಿ ಪ್ರಗತಿಯಲ್ಲಿರುತ್ತದೆ.

ಉಮ್ಮತ್ತೂರು ಮತ್ತು ಮಳಲವಾಡಿ ಗ್ರಾಮಗಳ ಪಶುವೈದ್ಯಕೀಯ ಸಂಸ್ಥೆಗಳ ಕಟ್ಟಡ ದುರಸ್ತಿ ಕೈಗೊಳ್ಳಲು 2012–13ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದೆ.

(ಆ) ಹುಣಸೂರು ತಾಲ್ಲೂಕಿಗೆ 2009–10ನೇ ಸಾಲಿನಿಂದ ಪಶು ಚಿಕಿತ್ಸಾಲಯ/ಆಸ್ಪತ್ರೆಗಳ ನಿರ್ಮಾಣಕ್ಕೆ/ದುರಸ್ತಿಗಾಗಿ ಬಿಡುಗಡೆಯಾದ ಅನುದಾನ.

(ರೂ. ಲಕ್ಷಗಳಲ್ಲಿ)

2009–10	2010–11	2011–2012
15,60	2.60	2.80

(ಇ) ನಿರ್ಮಾಣಗೊಂಡ ಆಸ್ಪತ್ರೆಗಳು ಸಾರ್ವಜನಿಕರಿಗೆ ಉಪಯುಕ್ತ ವಾಗಿರುತ್ತವೆ.

(ಈ) ಸರ್ಕಾರವು ಹೊಸದಾಗಿ ನಿರ್ಮಾಣ ಮಾಡುವ ಕಟ್ಟಡಗಳಿಗೆ ಕೇಂದ್ರ ಪುರಸ್ಕೃತ ವಿ.ಎಸ್.ವಿ.ಹೆಚ್.ಡಿ. ಯೋಜನೆ ಹಾಗೂ ರಾಜ್ಯ ಸರ್ಕಾರದ ಆರ್.ಐ.ಡಿ.ಎಫ್. ಯೋಜನೆಯಡಿ ಲಭ್ಯವಿರುವ ಅನುದಾನಕ್ಕನುಗುಣವಾಗಿ ಆದ್ಯತೆಯ ಮೇರೆಗೆ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗಿದೆ.

(ಉ) ಕೇಂದ್ರ ಸರ್ಕಾರದ ವಿ.ಎಸ್.ವಿಹೆಚ್.ಡಿ. ಯೋಜನೆ ಹಾಗೂ ರಾಜ್ಯ ಸರ್ಕಾರದ ಆರ್.ಐ.ಡಿ.ಎಫ್. ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆಗಾಗಿ ಕ್ರಮವಹಿಸಿದೆ.

ಸರ್ಕಾರಿ ಆಸ್ಪತ್ರೆಗಳಿಗೆ ವೈದ್ಯರ ನೇಮಕಾತಿ

306 (898) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಎಷ್ಟು ಮಂದಿ ವೈದ್ಯರನ್ನು ವಿವಿಧ ಸರ್ಕಾರಿ ಆಸ್ಪತ್ರೆಗಳಿಗೆ ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ; (ವಿವರ ನೀಡುವುದು)

(ಆ) ಎಷ್ಟು ಮಂದಿ ವೈದ್ಯರು ವಿವಿಧ ಕಾರಣ ನೀಡಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ? (ಜಿಲ್ಲಾವಾರು ವಿವರ ನೀಡುವುದು)

ಶ್ರೀ ಅರವಿಂದ ಲಿಂಬಾವಳಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಳೆದ 2 ವರ್ಷಗಳಲ್ಲಿ ಒಟ್ಟು 140 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಅಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಆ ಪೈಕಿ, 51 ವೈದ್ಯರು ರಾಜೀನಾಮೆ ನೀಡಿದ್ದಾರೆ, ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.